Ph. 22200660
Fax : 080-22266299, 22096688
e-mail : info@kfcsc.com

# ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ
# Karnataka Food & Civil Supplies Corporation Ltd.
(Government of Karnataka Undertaking)

ಸಂಖ್ಯೆ:ಕಆನಾಸನಿನಿ/ಆಡಳಿತ/ನೇ.ನೇ/746/2021-22/ ದಿನಾಂಕ:05-11-2024

## ಅಧಿಸೂಚನೆ

ವಿಷಯ:- ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ, ದಾಖಲಾತಿಗಳ ಪರಿಶೀಲನೆಗಾಗಿ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ:- 1. ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಕೆಕೆ). ದಿನಾಂಕ:23.06.2023.
2. ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಆರ್‌ಪಿಸಿ). ದಿನಾಂಕ:23.06.2023.
3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ದಿನಾಂಕ: 20.06.2024 ರಂದು ಪ್ರಕಟಿಸಲಾದ ಹುದ್ದೆವಾರು ಅರ್ಹತಾ ಪಟ್ಟಿ.

*-*-*-*

ಉಲ್ಲೇಖ 1ಮತ್ತು 2ರ ಅಧಿಸೂಚನೆಗಳಿಗೆ ಅನುಗುಣವಾಗಿ ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದಲ್ಲಿ ಈ ಕೆಳಕಂಡ ಹುದ್ದೆಗಳ ನೇರ ನೇಮಕಾತಿಗೆ ಸಂಬಂಧಿಸಿದಂತೆ ಸಾಮಾನ್ಯ ಪತ್ರಿಕೆ, ನಿರ್ದಿಷ್ಟ ಪತ್ರಿಕೆ, ಸಾಮಾನ್ಯ ಕನ್ನಡ, ಸಾಮಾನ್ಯ ಇಂಗ್ಲೀಷ್ , ಕಂಪ್ಯೂಟರ್ ಜ್ಞಾನ ಮುಂತಾದ ವಿಷಯಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ಅಕ್ಟೋಬರ್-2023 ಮತ್ತು ನವೆಂಬರ್-2023ರ ಮಾಹೆಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸಿರುತ್ತದೆ.

| ಕ್ರ.ಸಂ | ಹುದ್ದೆಗಳ ವಿವರ | ಒಟ್ಟು ಹುದ್ದೆ. |
|---|---|---|
| 01 | ಸಹಾಯಕ ವ್ಯವಸ್ಥಾಪಕರು | 10 |
| 02 | ಗುಣಮಟ್ಟ ನಿರೀಕ್ಷಕರು | 23 |
| 03 | ಹಿರಿಯ ಸಹಾಯಕರು (ಲೆಕ್ಕ) | 33 |
| 04 | ಹಿರಿಯ ಸಹಾಯಕರು | 57 |
| 05 | ಕಿರಿಯ ಸಹಾಯಕರು | 263 |
| ಒಟ್ಟು | | 386 |

5/11/24

Ph. 22200660
Fax : 080-22266299, 22096688
e-mail : info@kfcsc.com

# ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ
# Karnataka Food & Civil Supplies Corporation Ltd.
(Government of Karnataka Undertaking)



ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿದ ತರುವಾಯ, ತಾತ್ಕಾಲಿಕ ಸರಿ ಉತ್ತರಗಳನ್ನು (ಕೀ ಉತ್ತರಗಳು) ದಿನಾಂಕ:04-12-2023 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಕಟಿಸಿ ಅಭ್ಯರ್ಥಿಗಳಿಂದ ಆಕ್ಷೇಪಣೆಗಳನ್ನು ಸ್ವೀಕರಿಸಿ, ಆಕ್ಷೇಪಿತ ಕೀ ಉತ್ತರಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ ಅಂತಿಮ ಕೀ ಉತ್ತರಗಳನ್ನು ದಿನಾಂಕ:15-02-2024 ರಂದು ಪ್ರಕಟಿಸಿರುತ್ತದೆ.

ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ಅಂತಿಮ ಅಂಕಪಟ್ಟಿಯನ್ನು ಅಭ್ಯರ್ಥಿಗಳ/ಹುದ್ದೆವಾರು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್‌ನಲ್ಲಿ ದಿನಾಂಕ: 20.06.2024 ರಂದು ಪ್ರಕಟಿಸಲಾಗಿರುತ್ತದೆ.

ಮುಂದುವರೆದು, ದಾಖಲಾತಿಗಳ ಪರಿಶೀಲನೆಗಾಗಿ, ಸೂಚಿತ ರಿಕ್ತ ಸ್ಥಾನಗಳ ಆಧಾರದ ಮೇಲೆ ಹುದ್ದೆವಾರು ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ ವೆಬ್‌ಸೈಟ್ https://kfcsc.karnataka.gov.in ರಲ್ಲಿ 1:3 ಅರ್ಹತಾ ಪಟ್ಟಿಯನ್ನು ಪ್ರಕಟಿಸಲಾಗಿದೆ. ಸದರಿ ಪಟ್ಟಿಯು ಆಯ್ಕೆ ಪಟ್ಟಿಯಾಗಿರುವುದಿಲ್ಲ ದಾಖಲಾತಿ ಪರಿಶೀಲನೆಗೆ ಸಂಬಂಧಿಸಿದಂತೆ ದಿನಾಂಕವನ್ನು ಮತ್ತು ಇತರೆ ಹೆಚ್ಚಿನ ಮಾಹಿತಿಯನ್ನು ನಂತರದಲ್ಲಿ https://kfcsc.karnataka.gov.in ರ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು.

5/11/24

( ಎಂ.ವಿ ಚಂದ್ರಕಾಂತ್ ಭಾ.ಪೋ.ಸೇ )
ವ್ಯವಸ್ಥಾಪಕ ನಿರ್ದೇಶಕರು